ಆ) 2004ನೇ ಜನವರಿ ತಿಂಗಳಿನಿಂದೀಚೆಗೆ 2,369 ಮಂದಿ ಸಾಹಿತಿ/ಕಲಾವಿದರು ಮಾಸಾಶನ ಕೋರಿ ಅರ್ಜಿ ಸಲ್ಲಿಸಿದ್ದಾರೆ.

ಇ) 2004 ರಿಂದ ಸ್ವೀಕೃತವಾಗಿರುವ 2,369 ಅರ್ಜಿಗಳು ಬಾಕಿ ಉಳಿದಿವೆ.

ಈ) ಮಾಸಾಶನ ಮಂಜೂರು ಮಾಡಲು ಅರ್ಹ ಸಾಹಿತಿ/ಕಲಾವಿದರನ್ನು ಆಯ್ಕೆ ಮಾಡಲು ಆಯ್ಕೆ ಮಿತಿಯನ್ನು ರಚಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಉ) ಕಷ್ಟ ಪರಿಸ್ಥಿತಿಯಲ್ಲಿರುವ ಅರ್ಹ ಸಾಹಿತಿ/ಕಲಾವಿದರಲ್ಲಿ ಇದುವರೆಗೆ 13,060 ಮಂದಿಗೆ 500 ರೂ.ಗಳ ಮಾಸಾಶನ ಸೌಲಭ್ಯವನ್ನು ಒದಗಿಸಲಾಗಿದ್ದು ಬಾಕಿ ಉಳಿದ ಕಲಾವಿದರಿಗೆ ಆಯ್ಕೆ ಸಮಿತಿಯಲ್ಲಿ ಆಯ್ಕೆಯಾದ ನಂತರ ಮಾಸಾಶನವನ್ನು ಮಂಜೂರು ಮಾಡಲಾಗುವುದು.

463 (735) ಶ್ರೀ ಶಿವಾನಂದ ಎಸ್. ಪಾಟೀಲ್. (ಬಸವನಬಾಗೇವಾಡಿ): ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಬಿಜಾಪುರ ಜಿಲ್ಲೆಯಲ್ಲಿ ಹೊಸ ಅಂಗನವಾಡಿ ಕೇಂದ್ರಗಳನ್ನು ಸ್ಥಾಪಿಸಲು ಮಂಜೂರಾತಿ ನೀಡುವಂತೆ ಇಲಾಖೆಯಿಂದ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ;

ಆ) ಹಾಗಾದರೆ ಅವಶ್ಯಕತೆಯಿರುವ ಕಡೆಗಳಲ್ಲಿ ಹೊಸದಾಗಿ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ;

ಇ) ನಿರ್ದಿಷ್ಟಪಡಿಸಿದ ಕಾಲಮಿತಿಯೊಳಗಾಗಿ ಹೊಸ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸುವುದೇ?

ಶ್ರೀ ಹೆಚ್. ಕೆ. ಕುಮಾರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು):

ಅ. ಹೌದು. ದಿನಾಂಕ: 7.3.2006ರಂದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ

ಆ. ಬಿಜಾಪುರ ಜಿಲ್ಲೆಗೆ 2005–06ರ ಸಾಲಿನ ಅಂತ್ಯದಲ್ಲಿ 339ರ ಹೆಚ್ಚುವರಿ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲು ಮಂಜೂರಾತಿ ದೊರೆತಿರುತ್ತದೆ. ಇನ್ನೂ 239 ಹೊಸ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.

ಇ. ಕೇಂದ್ರ ಸರ್ಕಾರದ ಅನುಮತಿ ದೊರೆತ ತಕ್ಷಣ ಪ್ರಾರಂಭಿಸಲಾಗುವುದು.

464 (770) ಶ್ರೀ ಶಿವರಾಮು ಬಿ.(ಗಂಡಸಿ): ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ರಾಜ್ಯದಲ್ಲಿ ರಸ್ತೆಗಳನ್ನು ರಾಜ್ಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೇರಿಸಲು ಅನುಸರಿಸಬೇಕಾಗಿರುವ ಮಾರ್ಗಸೂಚಿಗಳೇನು ಹಾಗೂ ಮೇಲ್ದರ್ಜೆಗೇರಿಸುವಗ ಮಾರ್ಗಸೂಚಿ ನಿಯಮಾವಳಿಗಳನ್ನು ಅನುಸರಿಸಿರುತ್ತದೆಯೇ;

ಆ) ಹಾಸನ ಜಿಲ್ಲೆಯಲ್ಲಿ ರಸ್ತೆಗಳನ್ನು ಮೇಲ್ದರ್ಜೆಗೇರಿಸುವ ಯಾವುದಾದರೂ ಪ್ರಕರಣಗಳು ಇವೆಯೇ; ಹಾಗಿದ್ದಲ್ಲಿ ಅಂತಹ ಪಟ್ಟಿಯನ್ನು ಒದಗಿಸುವುದು?